ಹೊಸ ವಿದ್ಯುತ್ ಉಪ ಕೇಂದ್ರಗಳನ್ನು ತೆರೆಯುವುದು

515 (936) ಶ್ರೀ ಬಸವರಾಜ್ ಬಿ.ಎ. (ಕೆ. ಆರ್. ಪುರಂ) :– ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು ಮತ್ತು ಯಾವ ಪ್ರದೇಶದಲ್ಲಿವೆ; (ವಿವರ ನೀಡುವುದು)

(ಆ) ಪ್ರಸ್ತುತ ಅಳವಡಿಸಿರುವ ಟ್ರಾನ್ಸ್‌ಫಾರ್ಮರ್‌ಗಳಿಂದ ಈ ಕ್ಷೇತ್ರದ ವ್ಯಾಪ್ತಿಗೆ ಸಮರ್ಪಕವಾದ ವಿದ್ಯುತ್ ಸರಬರಾಜು ಆಗದೇ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಟ್ರಾನ್ಸ್‌ಫಾರ್ಮರ್‌ಗಳ ಕೊರತೆ ಇದ್ದು, ಸಮರ್ಪಕವಾದ ವಿದ್ಯುತ್ ಸರಬರಾಜು ಮಾಡಲು ಹೊಸ ವಿದ್ಯುತ್ ಉಪ ಕೇಂದ್ರಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಹೊಸ ವಿದ್ಯುತ್ ಉಪ ಕೇಂದ್ರಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :–

(ಅ) ಕೆ.ಆರ್. ಪುರಂ ವಿಧಾನ ಸಭಾ ಕ್ಷೇತ್ರದ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯಲ್ಲಿರುವ ವಿದ್ಯುತ್ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಮತ್ತು ಅವುಗಳು ಇರುವ ಪ್ರದೇಶಗಳ ವಿವರಗಳು ಈ ಕೆಳಕಂಡಂತಿವೆ :–

ಕ್ರ. ಸಂ	ಕಾ&ಪಾ ಘಟಕದ ಹೆಸರು	ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಕೆ.ವಿ.ಎ ಗಳಲ್ಲಿ						
		25	63	100	250	500	990	ಒಟ್ಟು
1	ಕೆ. ಆರ್. ಪುರಂ	6	17	117	129	7	0	276
2	ರಾಮಮೂರ್ತಿ ನಗರ	0	13	88	118	13	0	232
3	ಬೆನ್ನಿಗಾನಹಳ್ಳಿ	0	30	194	241	51	1	517
4	ಕಸ್ತೂರಿ ನಗರ	1	13	37	64	12	0	127
	ಒಟ್ಟು	**7**	**73**	**436**	**552**	**83**	**1**	**1152**

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಬೆಂಗಳೂರು ಪ್ರಸರಣ ವಲಯದ ವ್ಯಾಪ್ತಿಗೆ ಬರುವ ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರದಲ್ಲಿ, 12 ಸಂಖ್ಯೆ 66/ಯ 11 ಕೆ.ವಿ. ವಿದ್ಯುತ್ ಉಪ ಕೇಂದ್ರಗಳಲ್ಲಿ 25 ಸಂಖ್ಯೆಗಳ ಪವರ್ ಟ್ರಾನ್ಸ್‌ಫಾರ್ಮರ್‌ಗಳು ಕಾರ್ಯ ನಿರ್ವಹಿಸುತ್ತಿರುತ್ತವೆ. ವಿವರಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ.

(ಆ) ಕೆ. ಆರ್. ಪುರಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಆಕಸ್ಮಿಕ ಮತ್ತು ತಾಂತ್ರಿಕ ಅಡಚಣೆಗಳನ್ನು ಹೊರತುಪಡಿಸಿ ಸಾರ್ವಜನಿಕರಿಗೆ ಸಮರ್ಪಕವಾದ ವಿದ್ಯುತ್ತನ್ನು ಸರಬರಾಜು ಮಾಡಲಾಗುತ್ತಿದೆ.

(ಇ)ಮತ್ತು(ಈ) ಟ್ರಾನ್ಸ್‌ಫಾರ್ಮರ್‌ಗಳ ಕೊರತೆ ನೀಗಿಸಲು ಉಪ ವಿಭಾಗ ಮಟ್ಟದಲ್ಲಿ ಟ್ರಾನ್ಸ್‌ಫಾರ್ಮರ್ ಬ್ಯಾಂಕ್‌ಗಳ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗಿದೆ. ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರಕ್ಕೆ 12 ವಿದ್ಯುತ್ ಉಪ ಕೇಂದ್ರಗಳಿಂದ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಅಲ್ಲದೇ, ಸದರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2 ನೂತನ ವಿದ್ಯುತ್ ಉಪ ಕೇಂದ್ರಗಳ ಸ್ಥಾಪನೆಗಾಗಿ ಕ.ವಿ.ಪ್ರ.ನಿ.ನಿ.ಯು ಈ ಕೆಳಗಿನ ಕ್ರಮಗಳನ್ನು ಕೈಗೊಂಡಿದೆ.

1. **ಹೆಣ್ಣೂರು ರಸ್ತೆ:** 2 X 20 ಎಂ.ವಿ.ಎ., 66/11 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪಿಸುವುದಕ್ಕಾಗಿ ದಿನಾಂಕ: 07–06–2013 ರಂದು ಟೆಂಡರ್ ಕರೆಯಲಾಗಿದೆ.

2. **ಎಸ್. ಮೇಡಹಳ್ಳಿ:** 2 X 20 ಎಂ.ವಿ.ಎ., 66/11 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪನೆಗೆ ತಾಂತ್ರಿಕ ಸಾಧ್ಯತೆಗಳನ್ನು ಕ.ವಿ.ಪ್ರ.ನಿ.ನಿ.ಯು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಿದೆ.

ವಿಧಾನ ಸಭೆಯ ಮಾನ್ಯ ಸದಸ್ಯರಾದ ಶ್ರೀ ಬಸವರಾಜ್ ಬಿ.ಎ. ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 936 ಕ್ಕೆ ಅನುಬಂಧ :–

ಬೆಂಗಳೂರು ಪ್ರಸರಣ ವಲಯದ ವ್ಯಾಪ್ತಿಗೆ ಬರುವ ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಟ್ರಾನ್ಸ್‌ಫಾರ್ಮರ್‌ಗಳಿರುವ ಪ್ರದೇಶಗಳ ವಿವರಗಳು

ಕ್ರ. ಸಂ.	ವಿದ್ಯುತ್ ಉಪ ಕೇಂದ್ರದ ಹೆಸರು	ವೋಲ್ಟೇಜ್ ವರ್ಗ	ಪರಿವರ್ತಕಗಳ ಸಾಮರ್ಥ್ಯ (ಎಂ.ವಿ.ಎ.ಗಳಲ್ಲಿ)	2012–13ನೇ ಸಾಲಿನ ಪೀಕ್ ಲೋಡ್ (ಮೆ.ವ್ಯಾ.ಗಳಲ್ಲಿ)
1	ಬಾಣಸವಾಡಿ	66/11	31.5	22
		66/11	31.5	13.5
		66/11	20	13.5
2	ಇಪಿಐಪಿ, ವೈಟ್ ಫೀಲ್ಡ್	66/11	31.5	28.8
		66/11	31.5	22
		66/11	31.5	23.2
3	ಹೆಚ್.ಎ.ಎಲ್.	66/11	31.5	23
		66/11	31.5	15
4	ಹೂಡಿ	66/11	31.5	27.8
		66/11	31.5	27
5	ಐ.ಟಿ.ಐ	66/11	31.5	26.4
		66/11	31.5	24.8
6	ಕಾಡಬೀಸನಹಳ್ಳಿ	66/11	20	18.4
		66/11	31.5	20.8
7	ಕಾಡುಗೋಡಿ	66/11	31.5	26.3
		66/11	31.5	25.3
8	ಲೀಲಾ ಪೆಂಚರ್	66/11	20	15.6
		66/11	20	15.3
9	ಎನ್.ಜಿ.ಇ.ಎಫ್	66/11	31.5	19
		66/11	31.5	23.7

10	ಪ್ರೆಸ್ಟೀಜ್ ಶಾಂತಿನಿಕೇತನ	66/11	31.5	21.3
11	ಭಾಗಮನೆ ಟೆಕ್ ಪಾರ್ಕ	66/11 66/11	31.5 31.5	16 10.6
12	ಬ್ರಿಗೇಡ್ ಮೆಟ್ರೊಪೊಲಿಸ್	66/11 66/11	20 20	11.4 0

ಟ್ರಾನ್ಸ್‌ಫಾರ್ಮರ್‌ಗಳ ಕೊರತೆ

581 (656) ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) :– ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಮಸ್ಕಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸಿಂಧನೂರು, ಲಿಂಗಸುಗೂರು ಹಾಗೂ ಮಾನ್ವಿ ತಾಲ್ಲೂಕುಗಳಲ್ಲಿ ಟ್ರಾನ್ಸ್‌ಫಾರ್ಮರ್‌ಗಳ ಕೊರತೆಯಿಂದ ಸಾರ್ವಜನಿಕರು ಹಾಗೂ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ತಾಲ್ಲೂಕಿನಲ್ಲಿ ಸಾರ್ವಜನಿಕರು ಹಾಗೂ ರೈತರ ಹಿತದೃಷ್ಟಿಯಿಂದ 50 ಟ್ರಾನ್ಸ್ ಫಾರ್ಮರ್‌ಗಳನ್ನು ಹೆಚ್ಚುವರಿಯಾಗಿ ಸಂಗ್ರಹಿಸಿಡುವ ಯೋಜನೆ ಸರ್ಕಾರದ ಮುಂದಿದೆಯೇ ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :–

(ಅ)ಮತ್ತು(ಇ) ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಮಸ್ಕಿ ವಿಧಾನ ಸಭಾ ಕ್ಷೇತ್ರದ ಸಿಂಧನೂರು, ಲಿಂಗಸುಗೂರು ಹಾಗೂ ಮಾನ್ವಿ ತಾಲ್ಲೂಕುಗಳಲ್ಲಿ ಟ್ರಾನ್ಸ್‌ಫಾರ್ಮರ್‌ಗಳ ಸ್ವಲ್ಪ ಮಟ್ಟಿನ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ ಮಸ್ಕಿ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ತಾಲ್ಲೂಕಿನಲ್ಲಿ ವಿಫಲತೆಯ ಸರಾಸರಿಯನ್ನು ಆಧರಿಸಿ ಪರಿವರ್ತಕಗಳ ದಾಸ್ತಾನು ಮಾಡಿಕೊಳ್ಳುವುದಕ್ಕೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಅದರಂತೆ, ಟ್ರಾನ್ಸ್‌ಫಾರ್ಮರ್ ಬ್ಯಾಂಕ್‌ನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈಗಾಗಲೇ ಸಿಂಧನೂರಿನಲ್ಲಿ ಒಂದು